ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಆ/99/2024-25

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ: 06-09-2024

**ಪ್ರಕಟಣೆ-2**

ವಿಷಯ: 2024-25ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಪ್ರಕಟಣೆ ದಿನಾಂಕ:30.08.2024.

* * * * * * *

2024-25ನೇ ಶೈಕ್ಷಣಿಕ ಸಾಲಿನಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ (ಸರ್ಕಾರಿ ಸಂಸ್ಕೃತ ಹಾಗೂ ಚಿತ್ರಕಲಾ ಕಾಲೇಜುಗಳೂ ಒಳಗೊಂಡಂತೆ) ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು (ಗ್ರಂಥಪಾಲಕರು ಹಾಗೂ ದೈಹಿಕ ಶಿಕ್ಷಣ ಒಳಗೊಂಡಂತೆ) ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಆಯ್ಕೆ ಮಾಡಿಕೊಳ್ಳುವ ಸಂಬಂಧ ಉಲ್ಲೇಖದನ್ವಯ ಪ್ರಕಟಣೆಯನ್ನು ಹೊರಡಿಸಲಾಗಿದ್ದು, ಅದರಂತೆ ಅತಿಥಿ ಉಪನ್ಯಾಸಕರ ಸೇವೆಗೆ ಅರ್ಜಿ ಸಲ್ಲಿಸಲು ನಿಗಧಿಪಡಿಸಲಾಗಿದ್ದ ಕೊನೆಯ ದಿನಾಂಕ:07.09.2024 ನ್ನು ದಿನಾಂಕ:09.09.2024 ರವರೆಗೆ ವಿಸ್ತರಿಸಿ, ಈ ಕೆಳಕಂಡಂತೆ ತಾತ್ಕಾಲಿಕ ವೇಳಾಪಟ್ಟಿಯನ್ನು ಪರಿಷ್ಕರಿಸಲಾಗಿದೆ.

**I. ತಾತ್ಕಾಲಿಕ ವೇಳಾಪಟ್ಟಿ:**

| ಕ್ರ. ಸಂ. | ವಿವರ | ದಿನಾಂಕ |
|---|---|---|
| 1. | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: | 09.09.2024 |
| 2. | ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಿಸುವ ದಿನಾಂಕ: | 10.09.2024 |
| 3. | ಸಲ್ಲಿಸಿರುವ ಅರ್ಜಿಯನ್ನು EDIT ಮಾಡಲು ಅವಕಾಶ | 11.09.2024 & 12.09.2024 |
| 4. | ಕಾರ್ಯಭಾರ ಪ್ರಕಟಿಸುವ ದಿನಾಂಕ: | 21.09.2024 |
| 5. | ಮೆರಿಟ್ ಪಟ್ಟಿಯನ್ವಯ ಕಾಲೇಜು ಆಯ್ಕೆ ಕೌನ್ಸಿಲಿಂಗ್ ನಡೆಸುವ ದಿನಾಂಕಗಳು; | 23.09.2024 ರಿಂದ 27.09.2024 |
| 6. | ಕೌನ್ಸಿಲಿಂಗ್‌ನಲ್ಲಿ ಕಾಲೇಜು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸುವ ದಿನಾಂಕ: | 30.09.2024 |
| **ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಇಲಾಖೆಯ ಅಂತರ್ಜಾಲ ತಾಣ dce.karnataka.gov.in ಸಂಪರ್ಕಿಸುವುದು.** | | |

ಆಯುಕ್ತರು
ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ

**ಇವರಿಗೆ,**

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4) ಕಛೇರಿ ಪ್ರತಿ.